CC No.179/2020
CW-8  PW-6

**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು  ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ.  179/2020**

**ಹೆಸರು** :- **ಜೀವಪ್ಪ**

**ತಂದೆಯ ಹೆಸರು** :- **ಈರಪ್ಪ**

**ವಯಸ್ಸು** :- **53 ವರ್ಷ**

**ಉದ್ಯೋಗ** :- **ವ್ಯವಸಾಯ**

**ಸ್ಥಳ** :- **ಯಲವಾಟ**

**ದಿನಾಂಕಃ 07.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿಃ 25.12.2019 ರಂದು ನನ್ನ ವೈಯಕ್ತಿಕ ಕೆಲಸಕ್ಕಾಗಿ ಸೊರಬ ಪೊಲೀಸ್ ಠಾಣೆಗೆ ಹೋಗಿದ್ದು, ಅಲ್ಲಿ ಚಾಸಾ-1 ರವರು ಇದ್ದು, ಅವರು ಒಂದು ರವಿಕೆಯನ್ನು ಪೊಲೀಸರಿಗೆ ನೀಡುತ್ತಿದ್ದರು. ಆಗ ಬರವಣಿಗೆ ಮಾಡಿ ಓದಿ ಹೇಳಿ ನನ್ನ ಸಹಿ ಪಡೆದಿರುತ್ತಾರೆ. ಬೆಳಗ್ಗೆ 10.30 ರಿಂದ 11.30 ಗಂಟೆಯವರೆಗೆ ಮಹಜರ್ ಜರುಗಿಸಿರುತ್ತಾರೆ. ಸಾಕ್ಷಿಯು ಅಮಾನತ್ತು ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-4 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4 ಸಿ ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಭಾವಚಿತ್ರವನ್ನು ತೋರಿಸಿದ್ದು, ಅದು ಪಂಚನಾಮೆ ಕಾಲಕ್ಕೆ ತೆಗೆದ ಭಾವಚಿತ್ರ ಎಂದು ಸಾಕ್ಷಿ ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-5 ಎಂದು

ಗುರುತಿಸಲ್ಪಟ್ಟಿರುತ್ತದೆ. ಸಾಕ್ಷಿಯು ಚಾಸಾ–1 ರವರು ನೀಡಿದ ರವಿಕೆಯನ್ನು ನೋಡಿ ಗುರುತಿಸಿದ್ದು, ಅದು ಈಗಾಗಲೇ ಎಂ.ಓ–3 ಎಂದು ಗುರುತಿಸಲ್ಪಟ್ಟಿರುತ್ತದೆ.

**ಪಾಟಿ ಸವಾಲುಃ ಆರೋಪಿ ಪರ ಶ್ರೀ. ವೈ.ಜಿ.ಪಿ. ವಕೀಲರಿಂದಃ**

ಚಾಸಾ–1 ನನ್ನ ಹೆಂಡತಿಯ ತಂಗಿ. ನಾನು ಆ ದಿನ ನನ್ನ ವೈಯಕ್ತಿಕ ಕೆಲಸದ ನಿಮಿತ್ತ ಸೊರಬ ಪೊಲೀಸ್ ಠಾಣೆಗೆ ಬಂದಿರುತ್ತೇನೆ. ನಿಪಿ–4 ನ್ನು ನಾಗೇಶ ಎಂಬ ಪೊಲೀಸರು ಬರೆದಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನನಗೆ ಗೊತ್ತಿಲ್ಲ. ನಿಪಿ–4 ರ ಮೇಲೆ ನಾನು ತಾಲ್ಲೂಕು ಆಫೀಸಿನಲ್ಲಿ ಸಹಿ ಮಾಡಿರುತ್ತೇನೆ ಅಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**